ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	172
ಸದಸ್ಯರ ಹೆಸರು	:	ಶ್ರೀ ಕೆ.ಟಿ ಶ್ರೀಕಂಠೇಗೌಡ
ಉತ್ತರಿಸುವ ದಿನಾಂಕ	:	17-07-2019
ಉತ್ತರಿಸುವ ಸಚಿವರು	:	ಸಮಾಜ ಕಲ್ಯಾಣ ಸಚಿವರು.

ಕ್ರಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಭಿಕ್ಷಾಟನೆ ನಿರ್ಮೂಲನೆ ಮಾಡಲು ಸರ್ಕಾರ ಕೈಗೊಂಡಿರುವ ಅಗತ್ಯ ಕ್ರಮಗಳೇನು;	ಕರ್ನಾಟಕ ಭಿಕ್ಷಾಟನಾ ನಿಷೇಧ ಅಧಿನಿಯಮಗಳು ಮತ್ತು ನಿಯಮಗಳು 1975 ನ್ನು ಜಾರಿಗೆ ತರಲಾಗಿದೆ. ಆ ಮೇರೆಗೆ ಸಾರ್ವಜನಿಕ ಸ್ಥಳಗಳಲ್ಲಿ ಭಿಕ್ಷಾಟನೆಯಲ್ಲಿ ನಿರತರಾದ - ಭಿಕ್ಷುಕರುಗಳನ್ನು ಬಂಧಿಸಿ - ಪ್ರಾಥಮಿಕ ವಿಚಾರಣೆ ನಡೆಸಿ, ಭಿಕ್ಷುಕರೆಂದು ದೃಢಪಟ್ಟಲ್ಲಿ ತಾಲ್ಲೂಕು ದಂಡಾಧಿಕಾರಿಗಳ ಮುಂದೆ ಹಾಜರುಪಡಿಸಿ ಅವರ ಆದೇಶದನ್ವಯ ಕನಿಷ್ಠ 1 ವರ್ಷದಿಂದ ಗರಿಷ್ಠ 3 ವರ್ಷದವರೆಗೆ ನಿರಾಶ್ರಿತರ ಪರಿಹಾರ ಕೇಂದ್ರಗಳ ರಕ್ಷಣೆಯಲ್ಲಿ ಇರಿಸಲಾಗುವುದು.
ಆ)	ಮಹಿಳೆಯರು, ಮಕ್ಕಳು, ವೃದ್ಧರು ಮತ್ತು ಮಂಗಳಮುಖಿಯರು ಭಿಕ್ಷೆ ಬೇಡುತ್ತಿದ್ದು, ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)	ಕರ್ನಾಟಕ ಭಿಕ್ಷಾಟನಾ ನಿಷೇಧ ಅಧಿನಿಯಮ 1975 ಜಾರಿಯಲ್ಲಿದ್ದು, ಸದರಿ ಅಧಿನಿಯಮದ ಸೆಕ್ಷನ್ 2(4) ರನ್ವಯ 16 ವರ್ಷ ತುಂಬಿದ ಪುರುಷ, 18 ವರ್ಷ ತುಂಬಿದ ಮಹಿಳೆಯನ್ನು ಭಿಕ್ಷಾಟನಾ ಅಪರಾಧಕ್ಕಾಗಿ ಬಂಧಿಸಿ ಭಿಕ್ಷುಕರ/ ನಿರಾಶ್ರಿತರ ಪರಿಹಾರ ಕೇಂದ್ರಗಳಲ್ಲಿ ನಿಯಮಾನುಸಾರ ರಕ್ಷಣೆಯಲ್ಲಿ ಇರಿಸಲಾಗುವುದು. ಮೇಲ್ಕಂಡ ವಯೋಮಿತಿಗಿಂತ ಕಡಿಮೆ ಇರುವ ಮಕ್ಕಳನ್ನು ಬಂಧಿಸಲು ಅಧಿನಿಯಮದಲ್ಲಿ ಅವಕಾಶ ಇರುವುದಿಲ್ಲ. ಆದಾಗ್ಯೂ ಮಕ್ಕಳೊಂದಿಗೆ ಭಿಕ್ಷೆ ಬೇಡುತ್ತಿರುವ ಮಹಿಳಾ ಭಿಕ್ಷುಕರನ್ನು ಬಂಧಿಸಿದ ಸಂದರ್ಭಗಳಲ್ಲಿ ಮೊದಲನೇ ಬಾರಿ ಭಿಕ್ಷೇ ಬೇಡಿರುವುದಾಗಿ ವಿಚಾರಣೆಯಲ್ಲಿ ತಿಳಿದು ಬಂದಲ್ಲಿ ಅವರುಗಳಿಗೆ ಎಚ್ಚರಿಕೆ ನೀಡಿ ಬಿಡುಗಡೆ ಮಾಡಲಾಗುತ್ತದೆ. ವೃತ್ತಿಪರ ಭಿಕ್ಷುಕರೆಂದು ಧೃಡಪಟ್ಟಲ್ಲಿ ಅವರುಗಳನ್ನು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸ್ವೀಕರಣ ಕೇಂದ್ರದ ವಶಕ್ಕೆ ಒಪ್ಪಿಸಲಾಗುತ್ತದೆ.

----2

ಇ)	ಭಿಕ್ಷುಕರಿಗೆ ಪುನರ್ವಸತಿ ಕೇಂದ್ರಗಳನ್ನು ತೆರೆಯಲಾಗಿದೆಯೇ;	ಕರ್ನಾಟಕ ಭಿಕ್ಷಾಟನಾ ನಿಷೇಧ ಅಧಿನಿಯಮ 1975 ರನ್ವಯ ರಾಜ್ಯದ 14 ಜಿಲ್ಲಾ ಕೇಂದ್ರಗಳಾದ ಬೆಂಗಳೂರು, ಬೆಳಗಾವಿ, ಬಳ್ಳಾರಿ, ಚಿತ್ರದುರ್ಗ, ರಾಯಚೂರು, ತುಮಕೂರು ಶಿವಮೊಗ್ಗ, ಕೋಲಾರ, ಮೈಸೂರು, ಹುಬ್ಬಳ್ಳಿ-ಧಾರವಾಡ, ಮಂಗಳೂರು, ದಾವಣಗೆರೆ, ಕಲಬುರಗಿ, ವಿಜಯಪುರ ಜಿಲ್ಲೆಗಳಲ್ಲಿ ನಿರಾಶ್ರಿತರ ಪರಿಹಾರ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ. ಚಾಮರಾಜನಗರ, ಹಾಸನ, ಹಾವೇರಿ, ಯಾದಗಿರಿ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಹೊಸ ನಿರಾಶ್ರಿತರ ಪರಿಹಾರ ಕೇಂದ್ರಗಳನ್ನು ಪ್ರಾರಂಭಿಸಲು 2017-18 ನೇ ಸಾಲಿನಲ್ಲಿ ಮಂಜೂರಾತಿ ನೀಡಲಾಗಿದ್ದು, ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ.
ಈ)	ಭಿಕ್ಷಾಟನೆಯನ್ನು ನಿರ್ಮೂಲನೆ ಮಾಡಲು ಸರ್ಕಾರ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವುದೇ?	ಕರ್ನಾಟಕ ಭಿಕ್ಷಾಟನಾ ನಿಷೇಧ ಅಧಿನಿಯಮಗಳು ಮತ್ತು ನಿಯಮಗಳು 1975 ನ್ನು ಜಾರಿಗೆ ತರಲಾಗಿದ್ದು, ಭಿಕ್ಷಾಟನೆಯಲ್ಲಿ ತೊಡಗಿರುವ ಭಿಕ್ಷುಕರನ್ನು ನಿಯಮಾನುಸಾರ ಬಂಧಿಸಿ, ತಾಲ್ಲೂಕು ಮ್ಯಾಜಿಸ್ಟ್ರೇಟ್ ರ ಆದೇಶದನ್ವಯ ಕನಿಷ್ಠ 1 ವರ್ಷ ದಿಂದ ಗರಿಷ್ಠ 03 ವರ್ಷಗಳವರೆಗೆ ನಿರಾಶ್ರಿತರ ಪರಿಹಾರ ಕೇಂದ್ರಗಳ ರಕ್ಷಣೆಯಲ್ಲಿ ಇರಿಸಲಾಗುತ್ತದೆ. ರಕ್ಷಣೆಯ ಅವಧಿಯಲ್ಲಿ ಅವರುಗಳಿಗೆ ಊಟ, ವಸತಿ, ಸಮವಸ್ತ್ರ, ಹಾಸಿಗೆ-ಹೊದಿಕೆ, ಇತ್ಯಾದಿಗಳನ್ನು ಒದಗಿಸಲಾಗುತ್ತದೆ. ಸಾಮಾನ್ಯವಾಗಿ ಮಾನಸಿಕ ಮತ್ತು ದೈಹಿಕ ರೋಗಗಳಿಂದ ಬಳಲುವ ಕಾರಣ ಚಿಕಿತ್ಸೆಗೆ ಮೊದಲ ಆದ್ಯತೆ ನೀಡಲಾಗುತ್ತಿದ್ದು, ವೈದ್ಯಕೀಯ ಚಿಕಿತ್ಸೆ ನೀಡಲಾಗುತ್ತಿದೆ. ಭಿಕ್ಷಾಟನೆಗೆ ಮರಳದಂತೆ ಸ್ವಾವಲಂಬಿಗಳಾಗಿ ಜೀವನ ನಡೆಸಲು ಹೊಲಿಗೆ,ಕೃಷಿ ಮತ್ತು ತೋಟಗಾರಿಕೆ, ಗೃಹೋಪಯೋಗಿ ವಸ್ತುಗಳ ತಯಾರಿಕೆ, ಫೈಲ್ ರ್‍ಯಾಪರ್ ತಯಾರಿಕೆ, ಹಸು ಮತ್ತು ಮೇಕೆ ಸಾಕಾಣಿಕೆ ಇತ್ಯಾದಿ ವಿವಿಧ ವೃತ್ತಿಗಳಲ್ಲಿ ತರಬೇತಿ ನೀಡಲಾಗುತ್ತಿದೆ. ಭಿಕ್ಷುಕರ/ನಿರಾಶ್ರಿತರುಗಳಿಗೆ ಕೌನ್ಸಿಲಿಂಗ್ ನಡೆಸಿ ಅವರ ಕುಟುಂಬಗಳನ್ನು ಸಂಪರ್ಕಿಸಿ, ಅವರ ಮನೆಗಳಿಗೆ ಮರಳಿಸಲು ಕ್ರಮವಹಿಸಲಾಗಿದೆ.

ಸಕಇ 01 ಎಸ್‌ಬಿಆರ್ 2019

(ಪ್ರಿಯಾಂಕ್ ಖರ್ಗೆ)
ಸಮಾಜ ಕಲ್ಯಾಣ ಸಚಿವರು